ಇ) ಕರ್ನಾಟಕ ಧನವಿನಿಯೋಗ ವಿಧೇಯಕ, 2007 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು) :– ಮಾನ್ಯ ಚೇರ್ಮನ್‌ರವರೆ, 2007 ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಚೇರ್ಮನ್ :– ಪ್ರಸ್ತಾಪ ಏನೆಂದರೆ ;

"2007 ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು) :– ಮಾನ್ಯ ಚೇರ್ಮನ್‌ರವರೆ, 2007 ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಚೇರ್ಮನ್ :– ವಿಧೇಯಕವನ್ನು ಮಂಡಿಸಲಾಗಿದೆ.

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ಧನವಿನಿಯೋಗ ವಿಧೇಯಕ, 2007

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು) :– ಮಾನ್ಯ ಚೇರ್ಮನ್‌ರವರೆ, 2007 ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಚೇರ್ಮನ್ :– ಪ್ರಸ್ತಾವ ಏನೆಂದರೆ;

" 2007 ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಹಾಗೂ 3

ಚೇರ್ಮನ್ :– ಖಂಡ 2 ಹಾಗೂ 3 ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಹಾಗೂ 3 ಎರಡನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಚೇರ್ಮನ್ :– ಪ್ರಸ್ತಾವ ಏನೆಂದರೆ;

" ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು) :– ಮಾನ್ಯ ಚೇರ್ಮನ್‌ರೇ, 2007 ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಚೇರ್ಮನ್ :– ಪ್ರಸ್ತಾವ ಏನೆಂದರೆ;

" 2007 ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಶ್ರೀ ಜೆ.ಸಿ. ಮಾಧುಸ್ವಾಮಿ :– ಮಾನ್ಯ ಚೇರ್ಮನ್‌ರೇ ಈ ಪ್ರಸ್ತಾವಕ್ಕೆ ಕೊನೆಗೆ ಅಂಗೀಕಾರ ಒಂದನ್ನು ಕೇಳಿದ್ದರೆ ಸಾಕಾಗಿತ್ತು. ಎಲ್ಲವನ್ನು ಚರ್ಚೆ ಮಾಡಿ, ಪ್ರಸ್ತಾವ ಮಂಡಿಸುತ್ತೇವೆ. ಪ್ರಸ್ತಾವವನ್ನು ಪರ್ಯಾವಲೋಚನೆಗೆ ಹಾಕುತ್ತೇವೆಂದು ಓದುತ್ತಾ ಕುಳಿತರೆ, ಏನು ಇದು? ನಾವು ಎಲ್ಲಾ ಪ್ರಸ್ತಾವವನ್ನು ಪರ್ಯಾಲೋಚನೆ ಮಾಡಿದ್ದು. ಒಂದು ಮಾತನ್ನು ಅವರ ಹತ್ತಿರ ಅಂಗೀಕರಿಸಬೇಕೆಂದು ಕೇಳಿಸಿ, close ಮಾಡುವುದು ಬೇಡವಾ. . . .

ಚೇರ್ಮನ್ :– ಈಗ ನಿಯಮ 69 ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆಯನ್ನು ಮಾನ್ಯ ಮಲ್ಲಿಕಾರ್ಜುನ ಖರ್ಗೆಯವರು ಪ್ರಾರಂಭಿಸಬೇಕು.

ಶ್ರೀ ಮಲ್ಲಿಕಾರ್ಜುನ ಖರ್ಗೆ :– ಇದನ್ನು ನಾಳೆ ತೆಗೆದುಕೊಳ್ಳಿ.

ಚೇರ್ಮನ್ :– ಈಗ ಸದನದಲ್ಲಿ ಉತ್ತರಿಸುವ ಪ್ರಶ್ನೆಗಳನ್ನು ತೆಗೆದುಕೊಳ್ಳೋಣ. ಮಾನ್ಯ ಎಸ್.ಎಸ್. ಪಾಟೀಲ್‌ರವರೆ ಪ್ರಶ್ನೆಯನ್ನು ಕೇಳಿ.

4. ಪ್ರಶ್ನೋತ್ತರಗಳು

ಅ) ಚುಕ್ಕೆ ಗುರ್ತಿನ ಪ್ರಶ್ನೆಗಳಿಗೆ ಬಾಯಿ ಮಾತಿನ ಮೂಲಕ ನೀಡಲಾದ ಉತ್ತರಗಳು

ಪ್ರಶ್ನೆ : 256(1330)

ಚೇರ್ಮನ್ :– ಮಾನ್ಯ ಎಸ್. ಎಸ್. ಪಾಟೀಲ್‌ರವರೇ ತಮ್ಮ ಪ್ರಶ್ನೆ ಕಂದಾಯ ಇಲಾಖೆಯಿಂದ ವಸತಿ ಇಲಾಖೆಗೆ ವರ್ಗಾವಣೆಯಾಗಿದೆ. ಇನ್ನು ವಿಶ್ವೇಶ್ವರ ಹೆಗಡೆ ಕಾಗೇರಿಯವರೇ ಪ್ರಶ್ನೆಯನ್ನು ಕೇಳಿ.